# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **116** |
| ಸದಸ್ಯರ ಹೆಸರು | : | **ಶ್ರೀ ಕೆ. ಹರೀಶ್ ಕುಮಾರ್, (ವಿಧಾನ ಸಭೆಯಿಂದ ಚುನಾಯಿತರಾದವರು)** |
| ಉತ್ತರಿಸುವ ದಿನಾಂಕ | : | **13/09/2022** |
| ಉತ್ತರಿಸುವ ಸಚಿವರು | : | **ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿನ ತಾಲ್ಲೂಕು ಕೇಂದ್ರಗಳು ಪಟ್ಟಣ ಪಂಚಾಯತಿಗಳಾಗಿ ಕಾರ್ಯನಿರ್ವಹಿಸುತ್ತಿದ್ದು ಅವುಗಳನ್ನು ಮುನ್ಸಿಪಾಲಿಟಿಗಳನ್ನಾಗಿ ಮೇಲ್ದರ್ಜೆಗೇರಿಸುವ ಚಿಂತನೆ ಸರ್ಕಾರದ ಮುಂದಿದೆಯೇ; | ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಕಲಂ-3(1), 3(2) ರನ್ವಯ ಈ ಕೆಳಕಂಡ ಮಾನದಂಡಗಳನ್ನು ಪೂರೈಸುವ ಗ್ರಾಮ / ಪಟ್ಟಣ ಪಂಚಾಯಿತಿಗಳನ್ನು ಮುನ್ಸಿಪಾಲಿಟಿ / ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುತ್ತದೆ:<br>• ಆ ಪ್ರದೇಶದ ಜನಸಂಖ್ಯೆ 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರಬೇಕು;<br>• ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದರ ಕಿ.ಮೀ. ವಿಸ್ತೀರ್ಣಕ್ಕೆ 1,500 ಕ್ಕಿಂತ ಕಡಿಮೆ ಇಲ್ಲದಿರುವುದು;<br>• ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಭತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು;<br>• ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣದಲ್ಲಿ 50% ಕ್ಕಿಂತ ಕಡಿಮೆ ಇಲ್ಲದಿರುವುದು.<br><br>ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಂದ ಸೂಕ್ತ ಹಾಗೂ ಅರ್ಹ ಪ್ರಸ್ತಾವನೆಯು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರಿಗೆ ಸಲ್ಲಿಸಲ್ಪಟ್ಟು, ಅವರಿಂದ ನಿಯಮಾನುಸಾರ ಅರ್ಹವಾದ ಪ್ರಸ್ತಾವನೆಯು ಸರ್ಕಾರದಲ್ಲಿ |

| | | |
|---|---|---|
| | | ಸ್ವೀಕೃತವಾದಲ್ಲಿ ನಿಯಾಮನುಸಾರ ಪರಿಶೀಲಿಸಿ ಕ್ರಮ ವಹಿಸಲಾಗುತ್ತದೆ. |
| ಆ | ರಾಜ್ಯದಲ್ಲಿ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು: | ರಾಜ್ಯದಲ್ಲಿ ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಟ್ಟಣ ಪಂಚಾತಿಗಳ ಸಂಖ್ಯೆ: 61. |

**ಸಂಖ್ಯೆ:ನಅಇ 36 ಎಲ್‌ಸಿಕ್ಯೂ 2022.**

(ಎನ್. ನಾಗರಾಜು ಎಂ ಟಿ ಬಿ)
**ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆ ಹಾಗೂ**
**ಸಾರ್ವಜನಿಕ ಉದ್ದಿಮೆಗಳ ಸಚಿವರು**